# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 607 (724) |
| ಸದಸ್ಯರ ಹೆಸರು | ಶ್ರೀ ಡಾ|| ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) |
| ವಿಷಯ | ನಕಲಿ ಆಧಾರ್ ಕಾರ್ಡ್ ಪಡೆಯುತ್ತಿರುವ ಕುರಿತು |
| ಉತ್ತರಿಸಬೇಕಾದ ದಿನಾಂಕ | 12.07.2023 |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |
| **ಪ್ರಶ್ನೆ** | **ಉತ್ತರ** |
| ಅ) ರಾಜ್ಯದಲ್ಲಿ ನಕಲಿ ಆಧಾರ್ ಕಾರ್ಡ್ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಅನ್ವಯಿಸುವುದಿಲ್ಲ |
| ಆ) ಈ ವರ್ಷದಲ್ಲಿ ಎಷ್ಟು ನಕಲಿ ಆಧಾರ್ ಕಾರ್ಡುದಾರರನ್ನು ಗುರುತಿಸಿ ರದ್ದುಗೊಳಿಸಲಾಗಿದೆ; (ಜಿಲ್ಲಾವಾರು ವಿವರ ನೀಡುವುದು) | |
| ಇ) ಸಾಮಾಜಿಕ ಭದ್ರತಾ ಯೋಜನೆಗಳ ದುರುಪಯೋಗವಾಗುತ್ತಿರುವುದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು; | ಸಾಮಾಜಿಕ ಭದ್ರತಾ ಯೋಜನೆಗಳ ದುರುಪಯೋಗವಾಗುವುದನ್ನು ತಪ್ಪಿಸಲು ಸರ್ಕಾರದಿಂದ ನೀಡಲಾಗುತ್ತಿರುವ ಸೌಲಭ್ಯ/ ಸವಲತ್ತುಗಳನ್ನು ನೇರ ಹಣ ಸಂದಾಯ ಯೋಜನೆಯಡಿ ತರುವ ನಿಟ್ಟಿನಲ್ಲಿ, ಸಾಮಾಜಿಕ ಭದ್ರತೆ ಮತ್ತು ಪಿಂಚಣಿ ಯೋಜನೆಗಳಡಿ ವಿವಿಧ ಪಿಂಚಣಿ ಪಡೆಯುತ್ತಿರುವ ಎಲ್ಲಾ ಫಲಾನುಭವಿಗಳ ಆಧಾರ್ ಸಂಖ್ಯೆ ಬ್ಯಾಂಕ್/ಅಂಚೆ ಖಾತೆ ವಿವರ ನೀಡುವುದನ್ನು ಕಡ್ಡಾಯಗೊಳಿಸಿ, ಸರ್ಕಾರದ ಅಧಿಸೂಚನೆ ಸಂಖ್ಯೆ:ಆರ್.ಡಿ /153/ ಡಿ.ಎಸ್.ಪಿ/ 2014 /1069, ರ ದಿನಾಂಕ: 23/10/2017.ರಲ್ಲಿ ಆದೇಶ ಹೊರಡಿಸಲಾಗಿದೆ.<br><br>ಸಾಮಾಜಿಕ ಭದ್ರತೆ ಮತ್ತು ಪಿಂಚಣಿ ಯೋಜನೆಗಳಡಿ ಪಿಂಚಣಿ ಸೌಲಭ್ಯ ಪಡೆಯಲು ಆಧಾರ್ ಸಂಖ್ಯೆಯನ್ನು ಕಡ್ಡಾಯಗೊಳಿಸದ ಪೂರ್ವದಲ್ಲಿ ಫಲಾನುಭವಿಗಳ ನಿಖರವಾದ ಆಧಾರ್ ಸಂಖ್ಯೆಯನ್ನು ಗುರುತಿಸಲು ತಂತ್ರಾಂಶದಲ್ಲಿ ಯಾವುದೇ ಸೇವೆಗಳು ಲಭ್ಯವಿಲ್ಲದಿದ್ದರಿಂದ ಒಂದೇ ಆಧಾರ್ ಸಂಖ್ಯೆಯನ್ನು ನೀಡಿ ಒಂದಕ್ಕಿಂತ ಹೆಚ್ಚಿನ ಪಿಂಚಣಿಗಳನ್ನು ಫಲಾನುಭವಿಗಳು ಪಡೆದಿರುವ ಅವಕಾಶವಿತ್ತು.<br><br>ಪ್ರಸ್ತುತ ನಾಡಕಛೇರಿಯ ದತ್ತಾಂಶವು UIDAI ರವರೊಂದಿಗೆ ಅನುಕಲನಗೊಂಡಿರುವ ಹಿನ್ನಲೆಯಲ್ಲಿ ಅರ್ಜಿದಾರರು ಪಿಂಚಣಿ ಕೋರಿ ಅರ್ಜಿ ಸಲ್ಲಿಸುವ ಸಮಯದಲ್ಲಿ ನೀಡುವ ಆಧಾರ್ ಸಂಖ್ಯೆಯನ್ನು ನಮೂದಿಸಿ ಅರ್ಜಿ ಸ್ವೀಕರಿಸಲು ಕ್ರಮವಹಿಸುತ್ತಿದ್ದು, ಆಧಾರ್ ಸಂಖ್ಯೆಯ ನೈಜತೆಯ ಪರಿಶೀಲನೆಗಾಗಿ UIDAI ರವರ ದತ್ತಾಂಶದಲ್ಲಿ ಲಭ್ಯವಿರುವ ಮಾಹಿತಿಯನ್ನು ಪಡೆಯುವುದರ ಮೂಲಕ ನಿಖರವಾದ ಆಧಾರ್ ಸಂಖ್ಯೆ ಹಾಗೂ ಅರ್ಜಿದಾರರ ವಿವರವನ್ನು ಖಚಿತಪಡಿಸಿಕೊಂಡು ಪಿಂಚಣಿ ಯೋಜನೆಯ ಅರ್ಜಿಗಳನ್ನು ಸ್ವೀಕರಿಸುತ್ತಿರುವುದರಿಂದ ಯಾವುದೇ ನಕಲಿ ಆಧಾರ್ ಕಾರ್ಡ್ ನೀಡಿ ಯೋಜನೆಗಳ ಸೌಲಭ್ಯ ಪಡೆಯಲು ಸಾಧ್ಯವಿರುವುದಿಲ್ಲ.<br><br>ಫಲಾನುಭವಿ ದತ್ತಾಂಶದಲ್ಲಿ ಎಲ್ಲಾ ಪ್ರಕರಣಗಳಲ್ಲಿ ಆಧಾರ್ |

| | |
|---|---|
| | ಸಂಖ್ಯೆಯನ್ನು ನಮೂದಿಸುವಾಗ UIDAI ದತ್ತಾಂಶದೊಂದಿಗೆ ಮೌಲೀಕರಣಗೊಳಿಸಿ Update ಮಾಡಲಾಗುತ್ತಿದೆ. ಫಲಾನುಭವಿ ದತ್ತಾಂಶದಲ್ಲಿ ನಮೂದಾಗಿದ್ದ ಪ್ರಕರಣಗಳಲ್ಲಿ Aadhar Duplicate ಆಗಿದ್ದ ಒಟ್ಟು 89795 ಪ್ರಕರಣಗಳನ್ನು ಗುರುತಿಸಿ 2020 ರಲ್ಲಿ ರದ್ದುಗೊಳಿಸಲಾಗಿರುತ್ತದೆ.<br><br>ಫಲಾನುಭವಿಗಳನ್ನು ನಿಖರವಾಗಿ ಗುರುತಿಸುವ ನಿಟ್ಟಿನಲ್ಲಿ ಆಧಾರ್ ಮಾಹಿತಿಯನ್ನು ಕಡ್ಡಾಯಗೊಳಿಸಿದ್ದು, ಶೇ 100 ಪ್ರಗತಿ ಸಾಧಿಸುವಲ್ಲಿ ಸರ್ಕಾರದ ಸುತ್ತೋಲೆ ಸಂಖ್ಯೆ : ಡಿಎಸ್ ಎಸ್ ಪಿ ಎಂಐ ಎಸ್ ಸಿ 56/2022 ದಿನಾಂಕ: 15.09.2022 ರ ಗಡುವು ನಿಗದಿಪಡಿಸಿದ್ದು, ಸದರಿ ದಿನಾಂಕದಿಂದ ನಂತರದಲ್ಲಿ ಆಧಾರ್ ಜೋಡಣೆಗೆ ಬಾಕಿಯಿದ್ದ ಹಾಗೂ ಇ.ಎಂ ಓ ಮೂಲಕ ಪಿಂಚಣಿ ಪಡೆಯುತ್ತಿದ್ದ ಒಟ್ಟು 145859 ಫಲಾನುಭವಿಗಳ ಪಿಂಚಣಿಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಯಿತು. ಅಂತಹ ಪ್ರಕರಣಗಳಲ್ಲಿ ಫಲಾನುಭವಿಗಳು ತಮ್ಮ ಆಧಾರ್ ಮತ್ತು ಬ್ಯಾಂಕ್ / ಅಂಚೆ ಖಾತೆ ವಿವರಗಳನ್ನು ಸಲ್ಲಿಸಿದ ನಂತರ ಸಂಬಂಧಪಟ್ಟ ತಹಶೀಲ್ದಾರರು ಪಿಂಚಣಿ ಮರುಚಾಲನೆಗೊಳಿಸಲು ತಂತ್ರಾಂಶದಲ್ಲಿ ಅವಕಾಶ ಕಲ್ಪಿಸಲಾಗಿದೆ. |
| ಈ) ಸಮಾಜದಲ್ಲಿ ದುರ್ಬಲರಿಗೆ ಅನ್ಯಾಯವಾಗುತ್ತಿರುವುದನ್ನು ತಡೆಯಲು ಕೈಗೊಂಡ ಕ್ರಮಗಳೇನು; | ಸಮಾಜದಲ್ಲಿ ದುರ್ಬಲರಿಗೆ / ವಯೋವೃದ್ಧರಿಗೆ ಅನುಕೂಲವಾಗುವ ದೃಷ್ಟಿಯಿಂದ "ಮನೆ ಬಾಗಿಲಿಗೆ ಮಾಸಾಶನ" ಅಭಿಯಾನದಡಿ ಸ್ವಯಂಪ್ರೇರಿತವಾಗಿ ಅರ್ಹ ಫಲಾನುಭವಿಗಳನ್ನು ಗುರುತಿಸಿ ಅರ್ಜಿರಹಿತ ಮೊಬೈಲ್ ಆಪ್ ಆಧರಿಸಿ ಪಿಂಚಣಿ ಮಂಜೂರಾತಿ ಅಭಿಯಾನಕ್ಕೆ ಚಾಲನೆ ನೀಡಿದ್ದು, 65,678 ಫಲಾನುಭವಿಗಳಿಗೆ ಸ್ವಯಂಪ್ರೇರಿತವಾಗಿ ಪಿಂಚಣಿ ಮಂಜೂರು ಮಾಡಲಾಗಿದೆ.<br>ಸಾಮಾಜಿಕ ಭದ್ರತಾ ಯೋಜನೆಗಳಡಿ ಪಿಂಚಣಿಯನ್ನು ನೇರ ಹಣ ಸಂದಾಯದ ಮೂಲಕ ಪಾವತಿಸುವಲ್ಲಿ ನೇರವಾಗಿ ಫಲಾನುಭವಿಯ ಬ್ಯಾಂಕ್ ಖಾತೆಗೆ ಪಿಂಚಣಿ ಜಮೆಯಾಗುತ್ತದೆ. |

**ಸಂಖ್ಯೆ: DSSP/LCQ/ 11/2023**

(ಕೃಷ್ಣ ಭೈರೇಗೌಡ)
**ಕಂದಾಯ ಸಚಿವರು**